## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ ಲೆಕ್ಕ ಶೀರ್ಷಿಕೆ-3054-80-196-1-03-300(ಯೊಜನೆ) Lumpsum- ಅಡಿ ಬೆಳಗಾವಿ ಜಿಲ್ಲೆ ಬೆಳಗಾವಿ ತಾಲ್ಲೂಕು ವ್ಯಾಪ್ತಿಯ ನಮ್ಮ ಹೊಲ ನಮ್ಮ ದಾರಿ ಯೋಜನೆಯಡಿ ಹೊಲಗಳಿಗೆ ಹೋಗುವ ಮಣ್ಣಿನ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ನೀಡಿರುವ ಆದೇಶ.

ಪ್ರಸ್ತಾವನೆ:

ಬೆಳಗಾವಿ ಜಿಲ್ಲೆ ಬೆಳಗಾವಿ ತಾಲ್ಲೂಕು ವ್ಯಾಪ್ತಿಯ ನಮ್ಮ ಹೊಲ ನಮ್ಮ ದಾರಿ ಯೋಜನೆಯಡಿ ಹೊಲಗಳಿಗೆ ಹೋಗುವ ಮಣ್ಣಿನ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ತುರ್ತಾಗಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ ಅನುದಾನ ಬಿಡುಗಡೆಗೊಳಿಸುವಂತೆ ಬಂದಿರುವ ಪ್ರಸ್ತಾವನೆಯನ್ನು ಗಮನಿಸಿದೆ.

ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ ಲೆಕ್ಕ ಶೀರ್ಷಿಕೆ-3054-80-196-1-03-300(ಯೋಜನೆ)Lumpsum ಅಡಿ ಪ್ರಸ್ತಾವಿತ ಬೆಳಗಾವಿ ಜಿಲ್ಲೆ ಬೆಳಗಾವಿ ತಾಲ್ಲೂಕು ವ್ಯಾಪ್ತಿಯ ನಮ್ಮ ಹೊಲ ನಮ್ಮ ದಾರಿ ಯೋಜನೆಯಡಿ ಹೊಲಗಳಿಗೆ ಹೋಗುವ ಮಣ್ಣಿನ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ: 174/3:ಆರ್‌ಆರ್‌ಸಿ:2017, ಬೆಂಗಳೂರು, ದಿನಾಂಕ:29-7-2017**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಬೆಳಗಾವಿ ಜಿಲ್ಲೆ ಬೆಳಗಾವಿ ತಾಲ್ಲೂಕು ವ್ಯಾಪ್ತಿಯ ನಮ್ಮ ಹೊಲ ನಮ್ಮ ದಾರಿ ಯೋಜನೆಯಡಿ ಹೊಲಗಳಿಗೆ ಹೋಗುವ ಮಣ್ಣಿನ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ ಲೆಕ್ಕ ಶೀರ್ಷಿಕೆ-3054-80-196-1-03-300 Lumpsum ಅಡಿ ಹೊಲಗಳಿಗೆ ಹೋಗುವ ರಸ್ತೆಯನ್ನು **ರೂ.8.50ಲಕ್ಷಗಳ** (ರೂಪಾಯಿಗಳು ಎಂಟು ಲಕ್ಷದ ಐವತ್ತು ಸಾವಿರಗಳು ಮಾತ್ರ) ಅನುದಾನದಲ್ಲಿ ಬೆಳಗಾವಿ ಜಿಲ್ಲೆ ಬೆಳಗಾವಿ ತಾಲ್ಲೂಕು ವ್ಯಾಪ್ತಿಯ ನಮ್ಮ ಹೊಲ ನಮ್ಮ ದಾರಿ ಯೋಜನೆಯಡಿ ಹೊಲಗಳಿಗೆ ಹೋಗುವ ಕೆಳಕಂಡ ಪ್ರಸ್ತಾವಿತ ಮಣ್ಣಿನ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಷರತ್ತುಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಲು **ಸರ್ಕಾರವು ಹರ್ಷಿಸುತ್ತದೆ.**

| ಕ್ರಸಂ | ಕಾಮಗಾರಿಯ ಹೆಸರು | ಹಂಚಿಕೆ ಮಾಡಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | ಬೆಳಗಾವಿ ತಾಲ್ಲೂಕಿನ ಗಜಪತಿ ಗ್ರಾಮದ ಪೂಜಾರಿಯವರ ಹೊಲದಿಂದ ಅಣ್ಣಾಸಾಹೇಬಾ ಪಾಟೀಲರ ಹೊಲಕ್ಕೆ ಹೋಗುವ ರಸ್ತೆ | 3.50 |
| 2 | ಬೆಳಗಾವಿ ತಾಲ್ಲೂಕಿನ ಕೆ.ಕೆ.ಕೊಪ್ಪ ಗ್ರಾಮದ ಶ್ರೀ ಪಾಟೀಲ ಹೊಲದ ಕೋಳಿ ಫಾರ್ಮದಿಂದ ಹೊಲಕ್ಕೆ ಹೋಗುವ ರಸ್ತೆ | 5.00 |
| | **ಒಟ್ಟು:** | **8.50** |

**ಷರತ್ತುಗಳು:**

1. ನಮ್ಮ ಹೊಲ ನಮ್ಮ ದಾರಿ ಯೋಜನೆಯಡಿ ರೈತರ ಹೊಲಗಳಿಗೆ ಹೋಗುವ ಮಣ್ಣಿನ ರಸ್ತೆಯನ್ನು ಕರ್ನಾಟಕ ಗ್ರಾಮ ಸ್ವರಾಜ್ಯ ಕಾಯ್ದೆ ಕಲಂ 60(ಬಿ) ರಂತೆ ಗ್ರಾಮ ಪಂಚಾಯಿತಿಗಳು ಸಮುದಾಯಿಕ ಗುತ್ತಿಗೆ ವಹಿಸುವ ಮೂಲಕ / ಇಂಜಿನಿಯರಿಂಗ್ ಇಲಾಖೆ ಮೂಲಕ ಅನುಷ್ಠಾನಗೊಳಿಸತಕ್ಕದ್ದು.
2. ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಗಳನ್ನು ಜಿಲ್ಲಾ ಪಂಚಾಯತಿ, ಇತರೆ ಯೋಜನೆಯಡಿ /ಕಾರ್ಯಕ್ರಮದಡಿ / ಲೆಕ್ಕ ಶೀರ್ಷಿಕೆಯಡಿ / ನರೇಗಾ ಯೋಜನೆಯಡಿ

ಯಾವುದೇ ಕಾರಣಕ್ಕೂ ಪುನರಾವರ್ತನೆಯಾಗಿರುವುದಿಲ್ಲವೆಂಬ ಅಂಶವನ್ನು ದೃಢಪಡಿಸಿ ಕೊಳ್ಳತಕ್ಕದ್ದು.

3. ಕಾಮಗಾರಿ ಪ್ರಾರಂಭಿಸುವ ಮುನ್ನ ಮತ್ತು ಮುಕ್ತಾಯದ ನಂತರ ರಸ್ತೆಯ ಸನ್ನಿವೇಶದ ಛಾಯಾ ಚಿತ್ರಗಳನ್ನು ತೆಗೆದು ವೆಬ್‌ಸೈಟ್ ನಲ್ಲಿ ಅಳವಡಿಸತಕ್ಕದ್ದು.
4. ಪ್ರಸ್ತುತ ಈ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸಿರುವ ಹೆಚ್ಚುವರಿ ರಸ್ತೆ ಕಾಮಗಾರಿಯನ್ನು Worksoft works monitoring ಪದ್ಧತಿ ಮುಖಾಂತರ ಉಸ್ತುವಾರಿ ಮಾಡಬೇಕಾಗಿದ್ದು, ಈ ಸಂಬಂಧ ಪೂರ್ಣ ಮಾಹಿತಿಯನ್ನು Worksoft website ನಲ್ಲಿ ತಪ್ಪದೇ ಅಳವಡಿಸತಕ್ಕದ್ದು.
5. ಕಾಮಗಾರಿಯನ್ನು 3rd party ರವರಿಂದ ತಪಾಸಣೆಗೆ ಒಳಪಡಿಸತಕ್ಕದ್ದು.
6. 2014–15ನೇ ಸಾಲಿನಿಂದ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಅನುಮೋದನೆಗೊಂಡ ಕ್ರಿಯಾ ಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ, ಹಣ ಪಾವತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಈಗಾಗಲೇ ಸೂಚಿಸಲಾಗಿದೆ. ಅದರಂತೆ, ಪ್ರಸ್ತುತ ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವ ನಿಬಂಧನೆಗೊಳಪಡಿಸಿದೆ.
7. ಈ ಆದೇಶದಂತೆ ಜಿಲ್ಲಾ ಪಂಚಾಯತಿಯು ಅನುಷ್ಠಾನಗೊಳಿಸಿದ ಕಾಮಗಾರಿಗಳಿಗೆ ತಾಲ್ಲೂಕುವಾರು ಭೌತಿಕ ಮತ್ತು ಆರ್ಥಿಕ ಪ್ರಗತಿ ವರದಿಯನ್ನು ಪ್ರತಿ ಮಾಹೆ ಮುಖ್ಯ ಇಂಜಿನಿಯರ್, ಪಂ.ರಾಜ್ ಇಂಜಿನಿಯರಿಂಗ್ ಇಲಾಖೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ರವರ ಮುಖಾಂತರ ಸರ್ಕಾರಕ್ಕೆ ನೀಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಾ. ಜೂವನಹಳ್ಳಿ ನಾಗರಾಜ್)
ನಿರ್ದೇಶಕರು
ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ:**

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
7. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU)(IF),5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
8. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.

9. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ ವಿಧಾನ ಸೌಧ, ಬೆಂಗಳೂರು
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
13. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರೆಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
14. ಜಿಲ್ಲಾ ಖಜಾನಾಧಿಕಾರಿಗಳು, ಬೆಳಗಾವಿ ಜಿಲ್ಲೆ.
15. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
16. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-9
18. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಳಗಾವಿ
19. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬೆಳಗಾವಿ
20. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬೆಳಗಾವಿ
21. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ
22. ರಕ್ಷಾ ಕಡತ / ಹೆಚ್ಚುವರಿ ಪ್ರತಿ.